ಒ.ಎಸ್.ನಂ:**187/2022**
ಪಿ.ಡಬ್ಲ್ಯೂ.1

**<u>ಸಾಕ್ಷಿಯನ್ನು ಕರೆಯಿಸಿ ಪ್ರಮಾಣಿಕರಿಸಲಾಯಿತು, ದಿನಾಂಕ:19.08.2023.</u>**

**<u>ಮುಖ್ಯ ವಿಚಾರಣೆ:-ವಾದಿ ಪರ ವಕೀಲರಿಂದ:-</u>**

ನಾನು ನನ್ನ ಮೌಖಿಕ ಮುಖ್ಯ ವಿಚಾರಣೆ ಬದಲಾಗಿ ಪ್ರಮಾಣ ಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ಸತ್ಯದಿಂದ ಕೂಡಿದ್ದು ಅದನ್ನು ನನ್ನ ಸೂಚನೆ ಮೇರೆಗೆ ತಯಾರಿಸಲಾಗಿರುತ್ತದೆ ಮತ್ತು ನಾನು ಅದನ್ನು ಓದಿ, ತಿಳಿದುಕೊಂಡು ಸಹಿ ಮಾಡಿರುತ್ತೇನೆ. ದಾವೆಗೆ ಸಂಬಂಧಪಟ್ಟ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿರುತ್ತೇನೆ.

ಈಗ ನೋಡುತ್ತಿರುವ ದಾವಾ ಆಸ್ತಿ ರಿ.ಸ.ನಂ:15/3, 15, 14 ಮತ್ತು 125 ನೇದರ ಸನ್ 2022-23 ನೇ ಸಾಲಿನ ಪಹಣಿ ಪತ್ರಿಕೆಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ.1 ರಿಂದ 4 ಎಂದು ಗುರುತಿಸಲಾಯಿತು.

ಈಗ ನೋಡುತ್ತಿರುವ ದಾವಾ ಆಸ್ತಿಗೆ ಸಂಬಂದಪಟ್ಟ ಎಂ.ಆರ್.ನಂ: 3/2005-06 ಮತ್ತು 5/2005-06 ನೇದ್ದರ ಮ್ಯುಟೇಷನ್ ರಿಜಿಸ್ಟರ್ ಪ್ರತಿಗಳನ್ನು ಹಾಜರುಪಡಿಸುತ್ತಿದ್ದು ಅವುಗಳನ್ನು ಕ್ರಮವಾಗಿ ನಿ.ಪಿ.5 ಮತ್ತು 6 ಎಂದು ಗುರುತಿಸಲಾಯಿತು.

ದಾವೆಯಲ್ಲಿ ಕೇಳಿದಂತೆ ಆದೇಶ ಮಾಡಲು ಕೋರಿಕೊಳ್ಳುತ್ತೇನೆ.

**<u>ಪಾಟೀ ಸವಾಲು:-ಪ್ರತಿವಾದಿ ನಂ:1 ರಿಂದ 4 ಪರ ವಕೀಲರಿಂದ:-</u>**

(ಪ್ರತಿವಾದಿ ನಂ:1 ರಿಂದ 4 ಮತ್ತು ಅವರ ಪರ ವಕೀಲರು ನ್ಯಾಯಾಲಯಕ್ಕೆ ಗೈರು ಹಾಜರಿದ್ದ ಕಾರಣ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು. )

**<u>ಮರು ವಿಚಾರಣೆ:</u>** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)

ಓ ಹೇ ಕೇ ಸರಿ ಇದೆ

ಸಹಿ

ಸಿವಿಲ್ ನ್ಯಾಯಾಧೀಶರು, ಜಗಳೂರು